# 12-08-2025

ವಿದ್ಯಾವರ್ಧಕ ಸಂಘ(ರಿ), ಮೈಸೂರು

## ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು

ಶೇಷಾದ್ರಿ ಐಯ್ಯರ್ ರಸ್ತೆ, ಮೈಸೂರು

ಐ.ಕ್ಯೂ.ಎ.ಸಿ ಘಟಕ ಹಾಗೂ ಅರ್ಥಶಾಸ್ತ್ರ ವಿಭಾಗ
ಮತ್ತು ಜಿಲ್ಲಾ ಕೌಶಲ್ಯಾಭಿವೃದ್ಧಿ ಘಟಕ, ಮೈಸೂರು ಜಂಟಿಯಾಗಿ
ಆಯೋಜಿಸಿರುವ ಒಂದು ದಿನದ ಮಾಹಿತಿ ಕಾರ್ಯಗಾರ




## ಕೌಶಲ್ಯ ಕರ್ನಾಟಕ

ಉದ್ಯಮ ಶೀಲತೆ ಹಾಗೂ ಜೀವನೋಪಾಯದ ಮಾರ್ಗ

**ಮುಖ್ಯ ಅತಿಥಿಗಳು :** **ಶ್ರೀ. ನಾರಾಯಣ ಮೂರ್ತಿ ಕೆ**
ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ
ಮೈಸೂರು ಜಿಲ್ಲೆ, ಮೈಸೂರು.

**ಅಧ್ಯಕ್ಷತೆ :** **ಡಾ. ಎಸ್ ಮರೀಗೌಡ**
ಪ್ರಾಂಶುಪಾಲರು
ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು, ಮೈಸೂರು

**ಉಪಸ್ಥಿತಿ :** **ಪ್ರೊ. ಸಿದ್ಧರಾಜು ಆರ್**
ಮುಖ್ಯಸ್ಥರು, ಅರ್ಥಶಾಸ್ತ್ರ ವಿಭಾಗ

**:** **ಪ್ರೊ. ಲಾವಣ್ಯ ಎಸ್**
ಅಧ್ಯಾಪಕ ಸಲಹೆಗಾರರು
ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜು ಮೈಸೂರು

ದಿನಾಂಕ: 12.08.2025ನೇ ಮಂಗಳವಾರ ಸಮಯ: 11.00 ಗಂಟೆಗೆ ಸ್ಥಳ: ಸೆಮಿನಾರ್ ಹಾಲ್
ವಿ.ವ.ಪ್ರ.ದ.ಕಾಲೇಜು, ಮೈಸೂರು



ಕೌಶಲ್ಯವೆನ್ನುವುದು ವ್ಯಕ್ತಿಯಿಂದ ವ್ಯಕ್ತಿಗೆ ಕ್ಷೇತ್ರದಿಂದ ಕ್ಷೇತ್ರಕ್ಕೆ ಬದಲಾಗುತ್ತಾ ಹೋಗುತ್ತದೆ, ಕೌಶಲ್ಯದಿಂದ ಬದುಕು ಅಭಿವೃದ್ಧಿ ಹೊಂದುತ್ತದೆ ಎಂದು ಮೈಸೂರು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕೆ.ನಾರಾಯಣಮೂರ್ತಿ ತಿಳಿಸಿದರು.

ನಗರದ ವಿದ್ಯಾವರ್ಧಕ ಪ್ರಥಮ ದರ್ಜೆ ಕಾಲೇಜಿನಲ್ಲಿ ದಿನಾಂಕ:12.08.2025ರಂದು "ಕೌಶಲ್ಯ ಕರ್ನಾಟಕ" ಎಂಬ ವಿಷಯ ಕುರಿತು ಆಯೋಜಿಸಿದ್ದ ಒಂದು ದಿನದ ಮಾಹಿತಿ ಕಾರ್ಯಗಾರದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು. ಕೌಶಲ್ಯ ಕೇಂದ್ರದ ಮುಖ್ಯ ಉದ್ದೇಶವೆಂದರೆ ಉದ್ಯೋಗಾಧಾರಿತ ಕೌಶಲ್ಯವನ್ನು ಬೆಂಬಲಿಸುವುದು ಮತ್ತು ಉನ್ನತೀಕರಿಸಿದ ತಂತ್ರಜ್ಞಾನವನ್ನು ಉದ್ಯೋಗಾಕಾಂಕ್ಷಿಗಳಿಗೆ ಪ್ರೇರೇಪಿಸುವುದು. ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಯೋಜನೆಗಳನ್ನು ಅನುಷ್ಠಾನಕ್ಕೆ ತರುವುದು ಜಿಲ್ಲಾ ಕೌಶಲ್ಯಾಭಿವೃದ್ಧಿ ಘಟಕದ ಜವಾಬ್ದಾರಿಯಾಗಿದೆ. ಈ ಘಟಕದಲ್ಲಿ ಉದ್ಯೋಗಾಕಾಂಕ್ಷಿಗಳಿಗೆ ಕೃತಕ ಬುದ್ಧಿಮತ್ತೆಯೂ ಸೇರಿದಂತೆ 20ಕ್ಕೂ ಹೆಚ್ಚಿನ ವಿಭಾಗಗಳಲ್ಲಿ ತರಬೇತಿಯನ್ನು ನೀಡಲಾಗುತ್ತಿದೆ. ಕೌಶಲ್ಯ ಕೇಂದ್ರವು ಹಲವು ಕೈಗಾರಿಕೆಗಳ ಜೊತೆ ಒಪ್ಪಂದ ಮಾಡಿಕೊಂಡಿದ್ದು, ತರಬೇತಿಯ ನಂತರ ಉದ್ಯೋಗವನ್ನು ಕೊಡಿಸಲಾಗುತ್ತಿದೆ.

ದೇಶದಲ್ಲಿ ಮಾತ್ರವಲ್ಲದೇ, ವಿದೇಶಗಳಲ್ಲಿಯೂ ನೌಕರಿ ಪಡೆಯುವ ಸಲುವಾಗಿ ಸರ್ಕಾರದ ವತಿಯಿಂದ ಉಚಿತ ತರಬೇತಿ ಮತ್ತು ಉಚಿತ ವೀಸಾ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಹಾಗೆಯೇ ವಿದೇಶೀ ಭಾಷೆಗಳ ಕಲಿಕೆಗೂ ಸಹ ಭಾಷಾ ಪ್ರಯೋಗಾಲಯಗಳನ್ನು ಸ್ಥಾಪಿಸಿ ಭಾಷೆಯನ್ನು ಕಲಿಯುವುದಕ್ಕೆ ಉತ್ತೇಜಿಸಲಾಗುತ್ತದೆ. ಅಷ್ಟೇ ಅಲ್ಲದೇ ರಾಜ್ಯ ಸರ್ಕಾರದ ಯುವನಿಧಿಯನ್ನು ಅನುಷ್ಠಾನಗೊಳಿಸುವ ಹೊಣೆಗಾರಿಕೆಯೂ ನಮ್ಮ ಜಿಲ್ಲಾ ಕೇಂದ್ರದ ಮೇಲಿದೆ ಎಂದು ತಿಳಿಸಿದ ಅವರು "ಉದ್ಯಮಿ ಆಗು ಉದ್ಯೋಗ ನೀಡು" ಎಂಬ ಘೋಷವಾಕ್ಯದೊಂದಿಗೆ ದೇಶದ ಜಿಡಿಪಿಯನ್ನು ಹೆಚ್ಚಿಸುವ ಸಲುವಾಗಿ ಉದ್ಯಮಶೀಲತೆಯನ್ನು ಪ್ರೋತ್ಸಾಹಿಸುವ ಸಲುವಾಗಿ ರೂ. 8 ಲಕ್ಷದವರೆಗೆ ಬ್ಯಾಂಕುಗಳಲ್ಲಿ ಸಹಾಯ ಧನದ ಆಧಾರದಲ್ಲಿ ಸಾಲವನ್ನು ನೀಡಲಾಗುತ್ತಿದೆ. ವಿದ್ಯಾವಂತರಿಗೆ ಮಾತ್ರವಲ್ಲದೇ ಅವಿದ್ಯಾವಂತರಿಗೂ ಸಹ ಜೀವನೋಪಾಯಕ್ಕಾಗಿ ಉಚಿತ ತರಬೇತಿಯನ್ನು ನೀಡುತ್ತಿದ್ದು ರೂ. 10 ಸಾವಿರದಿಂದ ರೂ.50 ಸಾವಿರದವರೆಗೆ ಸಾಲವನ್ನು ಸಣ್ಣ ವ್ಯಾಪಾರಕ್ಕಾಗಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಸಿದ್ಧರಾಜು.ಎಸ್ ಸ್ವಾಗತಿಸಿದ ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಡಾ.ಎಸ್.ಮರೀಗೌಡ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಅಧ್ಯಾಪಕರು, ಅಧ್ಯಾಪಕೇತರರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದ ಕಾರ್ಯಕ್ರಮವನ್ನು ಅರ್ಥಶಾಸ್ತ್ರ ವಿಭಾಗದ ಪವಿತ್ರ.ಟಿ ನಿರೂಪಿಸಿ ವಂದಿಸಿದರು.









SKILL













